# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯಲ್ಲಿ ವಿವಿಧ ಕಾಮಗಾರಿಗಳ ಮಾಹಿತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸುವಲ್ಲಿ ಸರ್ವರ್ ಮತ್ತು ತಾಂತ್ರಿಕ ದೋಷದಿಂದ ಆಗಿರುವ ಲೋಪಗಳ ಬಗ್ಗೆ ಅಧ್ಯಯನ - ಸಮಿತಿ ರಚಿಸುವ ಬಗ್ಗೆ.

*****

**ಪ್ರಸ್ತಾವನೆ:**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಕುರಿತಾದ ಸಂಪೂರ್ಣ ಮಾಹಿತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸುವುದು ಕಡ್ಡಾಯವಾಗಿರುತ್ತದೆ. ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗಿರುವ ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯ ಮಾಹಿತಿಯನ್ನು ಅಳವಡಿಸಿ ಹಣ ಪಾವತಿಗಾಗಿ ಬಿಲ್ಲುಗಳನ್ನು ಸಲ್ಲಿಸುವ ಸಮಯದಲ್ಲಿ ಸರ್ವರ್ ಮತ್ತು ತಾಂತ್ರಿಕ ದೋಷದಿಂದಾಗಿ ವರ್ಕ್ ಐ.ಡಿ.ಗಳು ಅದಲು ಬದಲಾಗಿರುವುದು, ಈ ಬಿಲ್ಲುಗಳು ಇನ್ನೂ ಪರಿಶೀಲನೆ ಹಂತದಲ್ಲಿದ್ದು, ಯಾವುದೇ ಹಣ ಪಾವತಿ ಮಾಡಿರುವುದಿಲ್ಲವೆಂದು ಕಂಡುಬಂದಿದ್ದು, ಇಂತಹ ಲೋಪದಿಂದಾಗಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮಂಜೂರಾದ ಸರ್ಕಾರದ ಅನುದಾನವು ದುರುಪಯೋಗವಾಗುವ ಸಂದರ್ಭಗಳು ಎದುರಾಗಿರುತ್ತವೆ. ಹಾಗಾಗಿ, ಅಭಿವೃದ್ಧಿ ಕಾಮಗಾರಿಗಳ ಮಾಹಿತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿದ ನಂತರ ಸದರಿ ಮಾಹಿತಿಗಳನ್ನು ಪರಿಶೀಲಿಸುವ ಸಂದರ್ಭಗಳಲ್ಲಿ ಸರ್ವರ್ ಮತ್ತು ತಾಂತ್ರಿಕ ದೋಷದಿಂದ ಈ ಹಿಂದೆ ಸದರಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅಳವಡಿಸಲಾದ ಮಾಹಿತಿಗಳಲ್ಲಿ ಬದಲಾವಣೆಗಳು ಕಂಡುಬಂದಿವೆ ಎಂದು ತಿಳಿದು ಬಂದಿದ್ದು ಈ ಬಗ್ಗೆ ಪರಿಶೀಲನೆ ನಡೆಸುವುದು ಅತ್ಯಂತ ಅವಶ್ಯವಿದ್ದು, ಈ ಬಗ್ಗೆ ಒಂದು ಸಮಿತಿಯನ್ನು ರಚಿಸಿ ಸಮಗ್ರ ಪರಿಶೀಲನೆ ನಡೆಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 44 ಇಎನ್‌ಕ್ಯೂ 2015, ಬೆಂಗಳೂರು, ದಿನಾಂಕ. 21-05-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಭಿವೃದ್ಧಿ ಕಾಮಗಾರಿಗಳ ಮಾಹಿತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿದ ನಂತರ ಸದರಿ ಮಾಹಿತಿಗಳನ್ನು ಪರಿಶೀಲಿಸುವ ಸಂದರ್ಭಗಳಲ್ಲಿ ಸರ್ವರ್ ಮತ್ತು ತಾಂತ್ರಿಕ ದೋಷದಿಂದ ಈ ಹಿಂದೆ ಸದರಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅಳವಡಿಸಲಾದ ಮಾಹಿತಿಗಳಲ್ಲಿ ವ್ಯತ್ಯಾಸಗಳು / ಬದಲಾವಣೆಗಳು ಕಂಡುಬಂದಿವೆಯೇ ಎಂಬ ಬಗ್ಗೆ ಪರಿಶೀಲನೆ ನಡೆಸಿ ವರದಿ ಸಲ್ಲಿಸುವ ಸಲುವಾಗಿ ಈ ಕೆಳಕಂಡ ಸಮಿತಿಯನ್ನು ಸರ್ಕಾರವು ರಚಿಸಿದೆ:-

| | | | |
|---|---|---|---|
| 1. | ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | - | ಅಧ್ಯಕ್ಷರು. |
| 2. | ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು | - | ಸದಸ್ಯರು |
| 3. | ಮುಖ್ಯಸ್ಥರು, ನ್ಯಾಷನಲ್ ಇನ್‌ಫಾರ್ಮೆಟಿಕ್ ಸೆಂಟರ್, ಬೆಂಗಳೂರು. | - | ಸದಸ್ಯರು |
| 4. | ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. | - | ಸದಸ್ಯ ಕಾರ್ಯದರ್ಶಿ |

ಮು.ತಿ.ನೋ.

ಸಮಿತಿಯು ಮೇಲೆ ತಿಳಿಸಿರುವ ಅಂಶದ ಬಗ್ಗೆ ಸಮಗ್ರವಾಗಿ ಪರಿಶೀಲನೆ ನಡೆಸಿ 3 ದಿನಗಳ ಒಳಗಾಗಿ ವರದಿಯನ್ನು ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

( ಸಿದ್ದೇಶ್ ಪೋಳಲಕಟ್ಟೆ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
4. ಮುಖ್ಯಸ್ಥರು, ನ್ಯಾಷನಲ್ ಇನ್‌ಫಾರ್ಮೆಟಿಕ್ ಸೆಂಟರ್, ಬೆಂಗಳೂರು.
5. ನಿರ್ದೇಶಕರು, ಇ-ಆಡಳಿತ, ಗ್ರಾ.ಅ.ಪಂ.ರಾಜ್ ಇಲಾಖೆ.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ ಯವರಿಗೆ.
2. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
3. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
4. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.